# <u>ಕರ್ನಾಟಕ ವಿಧಾನ ಪರಿಷತ್</u>

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 301 (390) |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 21.12.2022 |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದ ಗ್ರಾಮೀಣ ರಸ್ತೆಗಳ ದುರಸ್ಥಿ ಮಾಡುವ ಹೊಣೆಗಾರಿಕೆ ಯಾರಿಗೆ ಸೇರಿದೆ; | ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ: ವತಿಯಿಂದ ನಮ್ಮ ಗ್ರಾಮ ನಮ್ಮ ರಸ್ತೆ ಯೋಜನೆ ಮತ್ತು ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯಡಿ ಅನುಷ್ಠಾನಗೊಳಿಸಿದ ರಸ್ತೆ ಕಾಮಗಾರಿಗಳು ಪೂರ್ಣಗೊಂಡ ನಂತರ 5 ವರ್ಷಗಳ ವಾರ್ಷಿಕ ನಿರ್ವಹಣೆ ಹಾಗೂ 6ನೇ ವರ್ಷದ ಮರು ಡಾಂಬರೀಕರಣವನ್ನು ಮೂಲ ಗುತ್ತಿಗೆದಾರರು ನಿರ್ವಹಿಸುತ್ತಿದ್ದು, ತದನಂತರ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಗೆ ಹಸ್ತಾಂತರಿಸಲಾಗುತ್ತಿದೆ.<br><br>ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆವತಿಯಿಂದ ವಿಶೇಷ ಅಭಿವೃದ್ಧಿ ಯೋಜನೆ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಯೋಜನೆಯಡಿ ಅನುಷ್ಠಾನಗೊಳಿಸಿದ ರಸ್ತೆ ಕಾಮಗಾರಿಗಳು ಪೂರ್ಣಗೊಂಡ ನಂತರ ಒಂದು ವರ್ಷದ DLP (Defective Liability Period) ತದನಂತರ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಗೆ ಹಸ್ತಾಂತರಿಸಲಾಗುತ್ತಿದೆ.<br><br>ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ: ರಾಜ್ಯದ ಗ್ರಾಮೀಣ ರಸ್ತೆಗಳಲ್ಲಿನ ಡಿ.ಆರ್.ಆರ್.ಪಿ ವ್ಯಾಪ್ತಿಗೆ ಒಳಪಡುವ ಗ್ರಾಮೀಣ ರಸ್ತೆಗಳನ್ನು ಜಿಲ್ಲಾ ಪಂಚಾಯಿತಿ ಮುಖಾಂತರ ಅನುಮೋದನೆಗೊಂಡ ಕ್ರಿಯಾ ಯೋಜನೆಯಂತೆ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳಿಂದ ದುರಸ್ತಿಪಡಿಸಲಾಗುತ್ತಿದೆ. |

| | | |
|---|---|---|
| ಆ. | ಗ್ರಾಮೀಣ ಭಾಗದ ರಸ್ತೆಗಳಲ್ಲಿ ಭಾರಿ ವಾಹನಗಳು ಚಲಾವಣೆ ಮಾಡುವುದು ಸರಕು ವಾಹನಗಳು ಇತ್ಯಾದಿ ವಾಹನಗಳು ಚಲಿಸಿ ರಸ್ತೆಗಳು ಹಾಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರದ ಕ್ರಮವೇನು; | ಬಂದಿದೆ.<br><br>ವಾಹನ ಸಾಂದ್ರತೆಯನುಸಾರ ಹೊಸದಾಗಿ ನಿರ್ಮಾಣ ಮಾಡುವ ರಸ್ತೆಗಳಿಗೆ IRC SP-72ರನ್ವಯ ವಿನ್ಯಾಸ ಮಾಡಿ ನಿರ್ಮಾಣ ಕೈಗೊಳ್ಳಲಾಗುತ್ತದೆ.<br><br>ಹಾಲಿ ಬೆಂಗಳೂರು ನಗರ ಜಿಲ್ಲಾ ಪಂಚಾಯಿತಿಯ ಕೆಲವು ಭಾರಿ ವಾಹನ ಚಾಲನೆ ಇರುವ ರಸ್ತೆಗಳಿಗೆ B.M (Bituminous Macadam) ಡಾಂಬರು ಪದರಿಗೆ ಅವಕಾಶ ಕಲ್ಪಿಸಲಾಗಿದೆ. |
| ಇ. | ಗ್ರಾಮೀಣ ಭಾಗದ ರಸ್ತೆಗಳಲ್ಲಿ ಗುಂಡಿಗಳನ್ನು ತೋಡುವುದು, ಅಗೆಯುವುದು, ಹಾಳುಮಾಡುವುದು ಸಾಮಾನ್ಯವಾಗಿದ್ದು, ಈ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳಲು ಯಾರಿಗೆ ಹೊಣೆಗಾರಿಕೆಯನ್ನು ನೀಡಿರುತ್ತದೆ; ಇದನ್ನು ತಡೆಗಟ್ಟಲು ಸರ್ಕಾರದ ಕ್ರಮವೇನು? | ಜಿಲ್ಲಾ ಪಂಚಾಯಿತಿ ಹಂತದಲ್ಲಿಯೇ ಕ್ರಿಯಾ ಯೋಜನೆಗಳು ಅನುಮೋದನೆಗೊಳ್ಳುತ್ತಿದ್ದು, ಅನಧಿಕೃತವಾಗಿ ರಸ್ತೆಗಳನ್ನು ಅಗೆಯುವುದು, ಭಂಗಗೊಳಿಸುವಿಕೆಗೆ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳು ಸಕ್ಷಮ ಪ್ರಾಧಿಕಾರ ಹಾಗೂ ಜವಾಬ್ದಾರಿಯನ್ನು ಹೊಂದಿದ್ದು, ನಿಯಮಾನುಸಾರ ಕ್ರಮ ಕೈಗೊಳ್ಳಲು ಅವಕಾಶವಿರುತ್ತದೆ. |

**ಸಂ.ಗ್ರಾಅಪ/೧೪೮ನೇ ಅ/ವಿಧಾನ ಪರಿಷತ್‌ಚು.ರ.ಪ್ರ-೩೦೧ (೩೯೦)/೨೦೨೨**

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ